ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 03 ನೇ ಮಾರ್ಚ್, 2020

ನಕಲಿ ದಾಖಲಾತಿ ಸೃಷ್ಠಿಸಿ ಗಣಿಗಾರಿಕೆ ನಿರ್ಮಿಸಿರುವ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-

160 (186) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಾರ್ಚ್, 2018ಕ್ಕೆ ಕೊನೆಗೊಂಡ ಆರ್ಥಿಕ ವರ್ಷಕ್ಕೆ ಸಂಬಂಧಿಸಿದ ಸಿಎಜಿ ವರದಿಯಲ್ಲಿ ಅಕ್ರಮ ಗಣಿಗಾರಿಕೆಯಿಂದ ನಕಲಿ ದಾಖಲೆ ಸೃಷ್ಠಿಸಿ ಗಣಿಗಾರಿಕೆ ಮಾಡುತ್ತಿರುವುದರಿಂದ ಹಾಗೂ ವ್ಯಾಪ್ತಿ ಮೀರಿದ ಗಣಿಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ರೂ. 191.93 ಕೋಟಿ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅಕ್ರಮ ಗಣಿಕಾರಿಕೆ, ನಕಲಿ ದಾಖಲೆ ಸೃಷ್ಠಿಸಿ ಗಣಿಗಾರಿಕೆ ಹಾಗೂ ವ್ಯಾಪ್ತಿ ಮೀರಿದ ಗಣಿಗಾರಿಕೆ ಮಾಡುತ್ತಿರುವ ಬಗ್ಗೆ ಸಂಬಂಧಿತ ಅಧಿಕಾರಿಗಳಿಗೆ ತಿಳಿದಿರಲಿಲ್ಲವೇ; ಇಲ್ಲವೆಂದಾದಲ್ಲಿ ಅಂತಹ ಅಧಿಕಾರಿಗಳು ಕರ್ತವ್ಯ ಲೋಪವೆಸಗಿ ಸರ್ಕಾರಕ್ಕೆ ನಷ್ಟ ಉಂಟು ಮಾಡಿರುವ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಅಕ್ರಮವೆಸಗಲು ಸಹಾಯ ಮಾಡಿದ ಎಷ್ಟು ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ ?